## ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 299
2. ಸದಸ್ಯರ ಹೆಸರು : ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ
3. ಉತ್ತರಿಸಬೇಕಾದ ದಿನಾಂಕ :29.01.2026.
4. ಉತ್ತರಿಸುವ ಸಚಿವರು : ಮಾನ್ಯ ಸಣ್ಣ ನೀರಾವರಿ, ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು.

| ಕ್ರ ಸ | ಪ್ರಶ್ನೆ | ಉತ್ತರ |
|---|---|---|
| ಅ. | ದಕ್ಷಿಣ ಕನ್ನಡ ಜಿಲ್ಲೆ, ಬೆಳ್ತಂಗಡಿ ತಾಲ್ಲೂಕಿನ ಕೊಡಂಗೆ ಬೈಲಿನಿಂದ ಅರ್ಕಿಜೆ ಬೈಲಿನವರೆಗೆ ಬಹಳ ಹಿಂದಿನಿಂದ ಕೃಷಿ ವ್ಯವಸ್ಥೆಗಾಗಿ ಅಣೆಕಟ್ಟೆಯಿಂದ ಸಾಂಪ್ರದಾಯಿಕ ತೋಡಿನ ಮಖಾಂತರ ಸುಮಾರು 40 ಕುಟುಂಬಗಳ ಜಮೀನುಗಳಿಗೆ ಕೃಷಿ ಚಟುವಟಿಕೆಗಳಿಗೆ ನೀರಿನ ವ್ಯವಸ್ಥೆ ಕಲ್ಪಿಸಲಾಗಿದ್ದು, ಈಗ ಸದರಿ ಜಮೀನುಗಳಿಗೆ ನೀರು ಪೂರೈಕೆಯಲ್ಲಿ ಸಂಪೂರ್ಣ ವ್ಯತ್ಯಯವಾಗಲಿದ್ದು, ಪ್ರಸ್ತುತ ಪರಿಣಾಮಕಾರಿಯಾಗಿ ಹಾಗೂ ವ್ಯವಸ್ಥಿತವಾಗಿ ಸದರಿ ಜಮೀನುಗಳಿಗೆ ನೀರು ಪೂರೈಕೆಯಾಗಲು ತುರ್ತಾಗಿ ಕಾಲುವೆ ನಿರ್ಮಾಣ ಮಾಡಲೇಬೇಕಾದ ತುರ್ತು ಅನಿವಾರ್ಯತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲೂಕಿನ ಬಡಗಕಾರಂದೂರು ಗ್ರಾಮದ ಕೊಡಂಗೆ ಬೈಲು ಎಂಬಲ್ಲಿ ಫಲ್ಗುಣಿ ನದಿಗೆ ಅಡ್ಡಲಾಗಿ ನಿರ್ಮಿಸಿರುವ ಅಣೆಕಟ್ಟು ಬಹಳ ಹಳೆಯದಾಗಿರುತ್ತದೆ. ಸದರಿ ಕಿಂಡಿ ಆಣೆಕಟ್ಟು ಸಣ್ಣ ನೀರಾವರಿ ಇಲಾಖೇತರ ಕಿಂಡಿ ಅಣೆಕಟ್ಟು ಆಗಿದ್ದು, ಈ ಇಲಾಖೆಯ ನಿರ್ವಹಣೆಯಲ್ಲಿ ಇರುವುದಿಲ್ಲ.<br><br>ಸ್ಥಳ ಪರಿವೀಕ್ಷಣೆಗೆ ಕೈಗೊಂಡಿದ್ದು ತಾಂತ್ರಿಕ ಶಕ್ಯತೆ ಹಾಗೂ ಅನುದಾನದ ಲಭ್ಯತೆಯ ಮೇರೆಗೆ ಪ್ರಸ್ತಾವನೆಯನ್ನು ಪರಿಶೀಲಿಸಲಾಗುವುದು. |
| ಆ. | ಬಂದಿದ್ದಲ್ಲಿ, ಇದುವರೆಗೆ ಸದರಿ ಕಾಲುವೆ ನಿರ್ಮಾಣ ಮಾಡಲು ಅಗತ್ಯ ಕ್ರಮ ವಹಿಸದಿರಲು ಕಾರಣಗಳೇನು; | |
| ಇ. | ಯಾವ ಕಾಲಮಿತಿಯೊಳಗೆ ಸುಮಾರು 40 ಕುಟುಂಬಗಳ ಜಮೀನುಗಳಿಗೆ ಕೃಷಿ ಚಟುವಟಿಕೆಗಳಿಗೆ ಅಣೆಕಟ್ಟೆಯಿಂದ ನೀರಿನ ವ್ಯವಸ್ಥೆ ಕಲ್ಪಿಸಲು ಸದರಿ ಕಾಲುವೆ ನಿರ್ಮಾಣ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುವುದು; | |

**MID/12/LCQ/2026**

**(ಎನ್.ಎಸ್. ಬೋಸರಾಜು)**
ಸಣ್ಣ ನೀರಾವರಿ, ಹಾಗೂ ವಿಜ್ಞಾನ
ಮತ್ತು ತಂತ್ರಜ್ಞಾನ ಸಚಿವರು.